# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಕೊಡಗು ಜಿಲ್ಲೆಯಲ್ಲಿ ಮನೆ ಕಳೆದುಕೊಂಡ ಕುಟುಂಬಗಳಿಗೆ ವಸತಿ ಸೌಕರ್ಯ ಒದಗಿಸುವವರೆಗೆ ಬಾಡಿಗೆ ಭತ್ಯೆ ನೀಡುವ ಬಗ್ಗೆ

ಓದಲಾಗಿದೆ:
1. ಸರ್ಕಾರಿ ಆದೇಶ ಸಂಖ್ಯೆ:ವಇ 210 ಹೆಚ್‌ಎಎಂ 2018(ಭಾ-1), ದಿನಾಂಕ: 27.11.2018
2. ವ್ಯವಸ್ಥಾಪಕ ನಿರ್ದೇಶಕರು, ರಾಜೀವ್ ಗಾಂಧಿ ಗ್ರಾಮೀಣ ವಸತಿ ನಿಗಮ ನಿಯಮಿತ, ಇವರ ಕಚೇರಿ ಪತ್ರ ಸಂಖ್ಯೆ:RGRHCL 22 DUG 05 2018, ದಿನಾಂಕ:06.12.2018.

---0---

**ಪ್ರಸ್ತಾವನೆ:**

ಮೇಲೆ ಓದಲಾದ ಕ್ರಮ ಸಂಖ್ಯೆ(1)ರ ಆದೇಶದಲ್ಲಿ ಕೊಡಗು ಜಿಲ್ಲೆಯಲ್ಲಿ ಭೂ ಕುಸಿತ ಹಾಗೂ ನೆರೆ ಹಾವಳಿಯಿಂದ ಹಾನಿಗೊಳಗಾದ 840 ಕುಟುಂಬಗಳಿಗೆ ವಸತಿ ಸೌಕರ್ಯಗಳನ್ನು ಒದಗಿಸಲು ಆದೇಶಿಸಲಾಗಿದೆ.

ಓದಲಾದ ಕ್ರಮ ಸಂಖ್ಯೆ(2)ರ ವ್ಯವಸ್ಥಾಪಕ ನಿರ್ದೇಶಕರು, ರಾಜೀವ್ ಗಾಂಧಿ ಗ್ರಾಮೀಣ ವಸತಿ ನಿಗಮ ನಿಯಮಿತ ಇವರ ಪತ್ರದಲ್ಲಿ ಕೊಡಗು ಜಿಲ್ಲೆಯಲ್ಲಿ ಭೂ ಕುಸಿತ ಹಾಗೂ ನೆರೆ ಹಾವಳಿಯಿಂದ ಹಾನಿಗೊಳಗಾದ 840 ಕುಟುಂಬಗಳಿಗೆ ವಸತಿ ಸೌಕರ್ಯಗಳನ್ನು ಒದಗಿಸಲು ದಿನಾಂಕ:27.11.2018ರ ಆದೇಶದಲ್ಲಿ ಆದೇಶಿಸಿದೆ. ಆದರೆ, ವಸತಿ ಸೌಕರ್ಯ ಒದಗಿಸುವವರೆಗೆ ಬಾಡಿಗೆ ಭತ್ಯೆ ನೀಡುವ ಬಗ್ಗೆ ಪ್ರಸ್ತಾಪಿಸಿರುವುದಿಲ್ಲ. ಆದ್ದರಿಂದ ವಸತಿ ಸೌಕರ್ಯವನ್ನು ಒದಗಿಸುವವರೆಗೆ ಮನೆ ಬಾಡಿಗೆ ಭತ್ಯೆಯನ್ನು ಪ್ರತಿ ತಿಂಗಳು ರೂ.10,000/-ಗಳಂತೆ ನೀಡಲು ಹಾಗೂ ಈ ಭತ್ಯೆಯನ್ನು ಕುಟುಂಬದ ಮುಖ್ಯಸ್ಥರ ಹೆಸರಿನ ಬ್ಯಾಂಕ್ ಖಾತೆಗೆ ನೇರವಾಗಿ ಆರ್.ಟಿ.ಜಿ.ಎಸ್ ಮೂಲಕ ಜಿಲ್ಲಾಧಿಕಾರಿಯವರು ಮುಖ್ಯಮಂತ್ರಿಯವರ ಪರಿಹಾರ ನಿಧಿಯಿಂದ ಭರಿಸುವಂತೆ ಆದೇಶಿಸಲು ಕೋರಿರುತ್ತಾರೆ.

ಪ್ರಸ್ತಾವನೆಯನ್ನು ಪರಿಶೀಲಿಸಿ, ಈ ಕೆಳಗಿನಂತೆ ಆದೇಶಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ: ವಇ 210 ಹೆಚ್‌ಎಎಂ 2018(ಭಾ-1),**
**ಬೆಂಗಳೂರು, ದಿನಾಂಕ: 06.12.2018.**

ಮೇಲಿನ ಪ್ರಸ್ತಾವನೆಯ ಹಿನ್ನೆಲೆಯಲ್ಲಿ, ಈ ಕೆಳಕಂಡ ಅಂಶಗಳಿಗೆ ಸರ್ಕಾರದ ಮಂಜೂರಾತಿ ನೀಡಿದೆ.

1. ರೂ.10,000/- ಮನೆ ಬಾಡಿಗೆ ಭತ್ಯೆಯನ್ನು ನವೆಂಬರ್ 2018ರಿಂದ 10 ತಿಂಗಳವರೆಗೆ ಅಥವಾ ಸಂತ್ರಸ್ಥರಿಗೆ ವಸತಿ ಸೌಲಭ್ಯ ಕಲ್ಪಿಸುವವರೆಗೆ, ಅದರಲ್ಲಿ ಯಾವುದು ಮೊದಲೋ ಅಲ್ಲಿಯವರೆಗೆ ನೀಡಲು;
2. ಮನೆ ಬಾಡಿಗೆ ಭತ್ಯೆಯನ್ನು ಕುಟುಂಬದ ಮುಖ್ಯಸ್ಥರ ಹೆಸರಿನ ಬ್ಯಾಂಕ್ ಖಾತೆಗೆ ನೇರವಾಗಿ ಆರ್.ಟಿ.ಜಿ.ಎಸ್. ಮೂಲಕ ಜಿಲ್ಲಾಧಿಕಾರಿಯವರು ಮುಖ್ಯಮಂತ್ರಿಯವರ ಪರಿಹಾರ ನಿಧಿಯಿಂದ ಭರಿಸಲು;

ಪುಟ 2ಕ್ಕೆ

Scanned by CamScanner

3. ಪರಿಹಾರ ನೀಡುವ ಮೊದಲು ಜಿಲ್ಲಾಧಿಕಾರಿಗಳು ಫಲಾನುಭವಿಗಳ ನೈಜತೆಯನ್ನು ದೃಢೀಕರಿಸಿಕೊಂಡು ನಂತರವಷ್ಟೇ ಬಿಡುಗಡೆ ಮಾಡಲು:

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು
ಅವರ ಹೆಸರಿನಲ್ಲಿ

(ಉಮಾದೇವಿ)
ಸರ್ಕಾರದ ಜಂಟಿ ಕಾರ್ಯದರ್ಶಿ,
ವಸತಿ ಇಲಾಖೆ.

ಇವರಿಗೆ:

1. ಪ್ರಧಾನ ಮಹಾಲೇಖಪಾಲರು (G&SSA) (E&RSA) ಕರ್ನಾಟಕ, ಬೆಂಗಳೂರು.
2. ಪ್ರಧಾನ ಮಹಾಲೇಖಪಾಲರು (ಎ ಮತ್ತು ಇ) ಕರ್ನಾಟಕ, ಬೆಂಗಳೂರು.
3. ಸರ್ಕಾರದ ಮುಖ್ಯ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು
4. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು
5. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ, ಬೆಂಗಳೂರು
6. ಮಾನ್ಯ ಮುಖ್ಯ ಮುಂತ್ರಿಯವರ ಅಪರ ಮುಖ್ಯ ಕಾರ್ಯದರ್ಶಿಗಳು / ಪ್ರಧಾನ ಕಾರ್ಯದರ್ಶಿಗಳು / ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು
7. ಮಾನ್ಯ ವಸತಿ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಕಾಸ ಸೌಧ, ಬೆಂಗಳೂರು
8. ಮಾನ್ಯ ಪ್ರವಾಸೋದ್ಯಮ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವರು, ಕೊಡಗು ಜಿಲ್ಲೆ ಇವರ ಆಪ್ತ ಕಾರ್ಯದರ್ಶಿಗಳು
9. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಕಂದಾಯ ಇಲಾಖೆ
10. ವ್ಯವಸ್ಥಾಪಕ ನಿರ್ದೇಶಕರು, ರಾಜೀವ್ ಗಾಂಧಿ ಗ್ರಾಮೀಣ ವಸತಿ ನಿಗಮ ನಿಯಮಿತ, ಬೆಂಗಳೂರು.
11. ಜಿಲ್ಲಾಧಿಕಾರಿಗಳು, ಕೊಡಗು ಜಿಲ್ಲೆ, ಮಡಿಕೇರಿ
12. ನಿರ್ದೇಶಕರು, ಖಜಾನೆ ನಿರ್ದೇಶನಾಲಯ, ಪೋಡಿಯಂ ಬ್ಲಾಕ್, ಬೆಂಗಳೂರು-01.
13. ಜಂಟಿ ನಿರ್ದೇಶಕರು, ರಾಜ್ಯ ಹುಜೂರು ಖಜಾನೆ, ನೃಪತುಂಗ ರಸ್ತೆ, ಬೆಂಗಳೂರು.
14. ಸಹ ನಿರ್ದೇಶಕರು, ಖಜಾನೆ ಗಣಕಜಾಲ ಕೇಂದ್ರ, ರೇಸ್‌ಕೋರ್ಸ್ ರಸ್ತೆ, ಬೆಂಗಳೂರು.
15. ಸರ್ಕಾರದ ಜಂಟಿ ಕಾರ್ಯದರ್ಶಿಗಳು, ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
16. ಸರ್ಕಾರದ ಉಪ ಕಾರ್ಯದರ್ಶಿ ಹಾಗೂ ವಿಶೇಷಾಧಿಕಾರಿ, ಬ್ಯಾಂಕಿಂಗ್, ಆರ್ಥಿಕ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
17. ಜಂಟಿ ನಿರ್ದೇಶಕರು (ಯೋಜನೆ) ವಸತಿ ಮತ್ತು ನಗರಾಭಿವೃದ್ಧಿ ಇಲಾಖೆ, ವಿಕಾಸ ಸೌಧ, ಬೆಂಗಳೂರು.
18. ಸರ್ಕಾರದ ಉಪಕಾರ್ಯದರ್ಶಿ (ಆ &ಸಂ), ಆರ್ಥಿಕ ಇಲಾಖೆ, 2ನೇ ಮಹಡಿ, ವಿಧಾನಸೌಧ, ಬೆಂಗಳೂರು.
19. ಆಂತರಿಕ ಆರ್ಥಿಕ ಸಲಹೆಗಾರರು ಹಾಗೂ ಸರ್ಕಾರದ ಉಪಕಾರ್ಯದರ್ಶಿ, ವಸತಿ, ನಗರಾಭಿವೃದ್ಧಿ, ಕಾನೂನು ಮತ್ತು 'ಇ'ಆಡಳಿತ ಇಲಾಖೆ.
20. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ-9) / (ಸಂಗ್ರಹಣಾ ಕೋಶ), ವಿಧಾನ ಸೌಧ, ಬೆಂಗಳೂರು.
21. ಸರ್ಕಾರದ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ವಸತಿ ಇಲಾಖೆ, ವಿಕಾಸ ಸೌಧ, ಬೆಂಗಳೂರು.
22. ಸರ್ಕಾರದ ಜಂಟಿ ಕಾರ್ಯದರ್ಶಿಯವರ ಪತ್ರಾಂಕಿತ ಆಪ್ತ ಸಹಾಯಕರು, ವಸತಿ ಇಲಾಖೆ, ವಿಕಾಸ ಸೌಧ, ಬೆಂಗಳೂರು.
23. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು /ಒಡಿಜಿಸಿ.

Scanned by CamScanner